ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

2. ಕರ್ನಾಟಕ (ಪ್ರಾದೇಶಿಕ ಕಾನೂನುಗಳು) ನಿರಸನಗೊಳಿಸುವ ವಿಧೇಯಕ 2011

ಶ್ರೀ ಎಸ್.ಸುರೇಶ್ ಕುಮಾರ್: (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):- ಮಾನ್ಯ ಅಧ್ಯಕ್ಷರೆ, ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕೃತ ರೂಪದಲ್ಲಿರುವ 2011ನೇ ಸಾಲಿನ ಕರ್ನಾಟಕ (ಪ್ರಾದೇಶಿಕ ಕಾನೂನುಗಳು) ನಿರಸಿನಗೊಳಿಸುವ ವಿಧೇಯಕವನ್ನು ಪಾರ್ಯಲೋಚಿಸಬೇಕೆಂದು ಸೂಚಿಸುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಎಸ್.ಸುರೇಶ್ ಕುಮಾರ್: (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):- ಮಾನ್ಯ ಸಭಾಧ್ಯಕ್ಷರೆ, 1956 ನೇ ಇಸವಿಯಲ್ಲಿ ನಮ್ಮ ರಾಜ್ಯ ಏನು ಸ್ಥಾಪನೆಯಾಯಿತು, ರಾಜ್ಯಗಳ ಪುನರ್‌ವಿಂಗಡನೆಯಾಯಿತು, ಅದಕ್ಕಿಂತ ಮುಂಚೆ ವಿಶೇಷವಾಗಿ ಬೆಳಗಾವಿ ಪ್ರದೇಶದ ಮುಂಬೈ ಕರ್ನಾಟಕ ಪ್ರದೇಶ, ಕೊಡುಗು ಜಿಲ್ಲೆ, ಗುಲ್ಬರ್ಗಾ ಪ್ರದೇಶದ ಹೈದರಾಬಾದ್ ಕರ್ನಾಟಕ ಮತ್ತು ಹಳೆಯ ಮೈಸೂರಿನ ಪ್ರದೇಶಗಳಲ್ಲಿ ಕೆಲವೊಂದಿಷ್ಟು ಕಾಯಿದೆಗಳಿದ್ದವು. 1956ರ ನಂತರ ಹೊಸ ಹೊಸ ಕಾಯಿದೆಗಳು ಬಂದ ಮೇಲೆ ಈ ಯಾವುದೇ ಕಾಯಿದೆಗಳು ಕಳೆದ ಸುಮಾರು 55 ವರ್ಷಗಳಲ್ಲಿ ನಾವು ಉಪಯೋಗಿಸುತ್ತಿಲ್ಲ. ಯಾವ್ಯಾವ ಕಾಯಿದೆಗಳು ಇವತ್ತು ಅನುಪಯುಕ್ತವಾಗಿವೆ ಇದನ್ನು ಪರಿಶೀಲಿಸಿ ಶಿಫಾರಸ್ಸು ಮಾಡಿ ವರದಿ ಸಲ್ಲಿಸಲು ಕರ್ನಾಟಕ ಉಡಳಿತ ನ್ಯಾಯಮಂಡಳಿಯ ನಿವೃತ್ತ ಉಪಾಧ್ಯಕ್ಷರಾದ ಶ್ರೀ ಕೆ.ಆರ್.ಚಾಮಯ್ಯನವರ ನೇತೃತ್ವದಲ್ಲಿ ಒಂದು ಸಮಿತಿಯನ್ನು ರಚಿಸಲಾಗಿತ್ತು. ಆ ಸಮಿತಿಯವರು ಈಗಾಗಲೇ ಕಳೆದ ವರ್ಷ ವರದಿಯ ಒಂದು ಕಂತನ್ನು ಕೊಟ್ಟಿದ್ದು ಅದನ್ನು ನಾವು ಸದನದಲ್ಲಿ ಮಂಡಿಸಿ ಅನುಮೋದನೆ ತೆಗೆದುಕೊಂಡಿದ್ದೆವು. ಆ ಸಮಿತಿಯ ಮೊದಲಿನ ವರದಿ ಪ್ರಕಾರ ಈ ಎಲ್ಲಾ ಭಾಗಗಳ ಸುಮಾರು 541ಕ್ಕಿಂತ ಹೆಚ್ಚು ಅಧಿನಿಯಮಗಳನ್ನು ಕಾಯಿದೆಗಳನ್ನು ನಾವು ನಿರಸನಗೊಳಿಸಿದೆವು. ಈಗ ಆ ಸಮಿತಿ ಎರಡನೆ ವರದಿ ಕೊಟ್ಟಿದೆ. ಅದರ ಪ್ರಕಾರ ಬೆಳಗಾವಿ ಪ್ರದೇಶದ 41 ಅಧಿನಿಯಮಗಳು, ಕಾಯಿದೆಗಳು,

ಕೊಡುಗು ಜಿಲ್ಲೆಯ 1 ಅಧಿನಿಯಮ, ಗುಲ್ಬರ್ಗಾ ಪ್ರದೇಶದ 5 ಪ್ರಾದೇಶಿಕ ಅಧಿನಿಯಮಗಳು, ಮಂಗಳೂರು ಮತ್ತು ಕೊಳ್ಳೇಗಾಲ ಪ್ರದೇಶದ 36 ಕಾನೂನುಗಳು, ಹಳೆಯ ಮೈಸೂರಿನ 5 ಅಧಿನಿಯಮಗಳನ್ನು ಇವತ್ತು ಉಪಯೋಗ ಆಗುತ್ತಿಲ್ಲ, ಹೀಗಾಗಿ ಇವುಗಳನ್ನು ನಿರಸನಗೊಳಿಸಬೇಕು ಎಂದು ಆ ಸಮಿತಿ ವರದಿ ಮಾಡಿದೆ. ಇವತ್ತಿನ ಈ ಪ್ರಸ್ತಾಪದಲ್ಲಿ ಒಟ್ಟು 88 ಅಧಿನಿಯಮಗಳನ್ನು ನಿರಸನಗೊಳಿಸಬೇಕೆಂದು ಈ ವಿಧೇಯಕದ ಮುಖಾಂತರ ತಂದಿದ್ದೇವೆ. ಈ 88 ಪ್ರಾದೇಶಿಕ ಅಧಿನಿಯಮಗಳೇನಿವೆ ಅದು ಜಾರಿಯಲ್ಲಿಯೇ ಇಲ್ಲದಿರುವುದರಿಂದ, ಯಾವುದೇ ರೀತಿ ಉಪಯೋಗವಾಗುತ್ತಿಲ್ಲವಾದ್ದರಿಂದ ಇದನ್ನು ನಿರಸನಗೊಳಿಸಬೇಕೆಂದು ಈ ವಿಧೇಯಕವನ್ನು ಮಂಡಿಸಿದ್ದೇವೆ. ದಯವಿಟ್ಟು ನಾವು ಇದನ್ನು ಏನು ಪರ್ಯಾಲೋಚನೆಯಲ್ಲಿ ಚರ್ಚೆ ಮಾಡಿದ್ದೇವೆ, ಇದನ್ನು ಅನುಮೋದಿಸಬೇಕೆಂದು ಕೇಳಿಕೊಳ್ಳುತ್ತೇನೆ.

ಅಧ್ಯಕ್ಷರು: ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

ವಿಧಾನ ಪರಿಷತ್ತಿನಿಂದ ಅಂಗೀಕೃತ ರೂಪದಲ್ಲಿರುವ 2011ನೇ ಸಾಲಿನ ಕರ್ನಾಟಕ (ಪ್ರಾದೇಶಿಕ ಕಾನೂನುಗಳು) ನಿರಸನಗೊಳಿಸುವ ವಿಧೇಯಕವನ್ನು ಈ ಸಭೆಯು ಪರ್ಯಾಲೋಚಿಸುತ್ತದೆ ಎಂಬ ವಿಷಯ ಸಭೆಯ ಮುಂದೆ ಇದೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವಕ್ಕೆ ಅನುಮೋದನೆ ದೊರಕಿದೆ

ಖಂಡ 2 ರಿಂದ 4

ಅಧ್ಯಕ್ಷರು: ಈಗ ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕುತ್ತೇನೆ

2ರಿಂದ 4ರವರೆಗಿನ ಖಂಡಗಳು ವಿಧೇಯಕದ ಅಂಗವಾಗಿರಬೇಕು ಎನ್ನುವುದು ಸಭೆಯ ಮುಂದಿರುವ ವಿಷಯ

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವಕ್ಕೆ ಒಪ್ಪಿಗೆ ದೊರಕಿದೆ
2 ರಿಂದ 4ರವರೆಗಿನ ಖಂಡಗಳು ವಿಧೇಯಕದ ಅಂಗವಾದವು

ಮೊದಲನೆ ಖಂಡ, ಹೆಸರು ಮತ್ತು ಅವತರಣಿಕೆ

ಅಧ್ಯಕ್ಷರು: ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಭಾಗವಾಗಬೇಕೆಂಬುದು ಸಭೆಯ ಮುಂದಿರುವ ವಿಷಯ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ.

ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಅಂಗವಾಗಿದೆ.

ಪ್ರಸ್ತಾವದ ಅಂಗೀಕಾರ

ಶ್ರೀ ಎಸ್. ಸುರೇಶ್ ಕುಮಾರ್: (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):– ಮಾನ್ಯ ಅಧ್ಯಕ್ಷರೆ, ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2011ನೇ ಸಾಲಿನ ಕರ್ನಾಟಕ (ಪ್ರಾದೇಶಿಕ ಕಾನೂನುಗಳು) ನಿರಸನಗೊಳಿಸುವ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುತ್ತಿದ್ದೇನೆ.

ಅಧ್ಯಕ್ಷರು: ಪ್ರಸ್ತಾವವನ್ನು ಮಂಡಿಸಲಾಗಿದೆ. ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

ವಿಧಾನ ಪರಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2011ನೇ ಸಾಲಿನ ಕರ್ನಾಟಕ (ಪ್ರಾದೇಶಿಕ ಕಾನೂನುಗಳು) ನಿರಸನಗೊಳಿಸುವ ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

ಅಧ್ಯಕ್ಷರು: ಈಗ ಸದನವನ್ನು ನಾಳೆ ಬೆಳಿಗ್ಗೆ 11–00 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನವು ಮಧ್ಯಾಹ್ನ 1 ಗಂಟೆ 31 ನಿಮಿಷಕ್ಕೆ ಮುಕ್ತಾಯಗೊಂಡು ಪುನಃ ದಿನಾಂಕ 07ನೇ ಜೂನ್ 2011ರ ಮಂಗಳವಾರ ಬೆಳಿಗ್ಗೆ 11–00 ಗಂಟೆಗೆ ಸಮಾವೇಶಗೊಳ್ಳಲು ನಿಃಶ್ಚಯಿಸಿತು)

ಅನುಬಂಧ – I

(ಅ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಪ್ರಾಣಿ ಸಂಗ್ರಹಾಲಯದ ಪದ್ಧತಿ

10 (44) ಶ್ರೀ ಬಸವರಾಜನ್ ಎಸ್.ಕೆ (ಚಿತ್ರದುರ್ಗ): ಮಾನ್ಯ ಅರಣ್ಯ ಮತ್ತು ಸಣ್ಣ ಕೈಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಚಿತ್ರದುರ್ಗ ಜಿಲ್ಲೆಯ ಆಡುಮಲ್ಲೇಶ್ವರದಲ್ಲಿ ಪ್ರಾಣಿ ಸಂಗ್ರಹಾಲಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಪ್ರಾಣಿ ಸಂಗ್ರಹಾಲಯವು ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಈ ಪ್ರಾಣಿ ಸಂಗ್ರಹಾಲಯವನ್ನು ಅಭಿವೃದ್ಧಿ ಪಡಿಸಲು ಸರ್ಕಾರಕ್ಕಿರುವ ತೊಂದರೆಗಳೇನು;

ಈ) ಸರ್ಕಾರ ಈಗಲಾದರೂ ಈ ಪ್ರಾಣಿ ಸಂಗ್ರಹಾಲಯವನ್ನು ಅಭಿವೃದ್ಧಿ ಪಡಿಸಲು ಕ್ರಮ ಕೈಗೊಳ್ಳುವುದೇ;

ಉ) ಈ ಪ್ರಾಣಿ ಸಂಗ್ರಹಾಲಯದಲ್ಲಿ ಪ್ರಾಣಿಗಳಿಗೆ ಪಂಜರಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದಯೇ;

ಊ) ಹಾಗಿದ್ದಲ್ಲಿ ಈ ಪಂಜರಗಳ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಸಿ.ಹೆಚ್. ವಿಜಯಶಂಕರ್ (ಅರಣ್ಯ ಮತ್ತು ಸಣ್ಣ ಕೈಗಾರಿಕೆ ಸಚಿವರು):

ಅ) ಹೌದು.

ಆ) ಈ ಪ್ರಾಣಿ ಸಂಗ್ರಹಾಲಯವು ದುಸ್ಥಿತಿಯಲ್ಲಿದೆ.

ಇ) ಉದ್ಭವಿಸುವುದಿಲ್ಲ.